# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಮೌನವು ಮನಸ್ಸನ್ನು ಶುದ್ಧಿ ಮಾಡುವುದು
ಸ್ನಾನವು ದೇಹವನ್ನು ಶುದ್ಧಿ ಮಾಡುವುದು
ಧ್ಯಾನವು ಬುದ್ಧಿಯನ್ನು ಶುದ್ಧಿ ಮಾಡುವುದು
ಸತ್ಯವು ಜ್ಞಾನವನ್ನು ಶುದ್ಧಿ ಮಾಡುವುದು
ಪ್ರಾರ್ಥನೆಯು ಆತ್ಮವನ್ನು ಶುದ್ಧಿ ಮಾಡುವುದು
ದಾನವು ಸಂಪಾದನೆಯನ್ನು ಶುದ್ಧಿ ಮಾಡುವುದು
ಉಪವಾಸ ಆರೋಗ್ಯವನ್ನು ಶುದ್ಧಿ ಮಾಡುವುದು
ಕ್ಷಮೆಯು ಸಂಬಂಧವನ್ನು ಶುದ್ಧಿ ಮಾಡುವುದು
ಧರ್ಮದ ದಾರಿ ಎಲ್ಲವನ್ನು ಶುದ್ಧಿ ಮಾಡುವುದು
ಮಾನವವೀಯತೆ ಸ್ವರ್ಗದ ದಾರಿ ತೋರಿಸುವುದು
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 09-10-2026 to 15-10-2026 ಬೆಲೆ:10-00 ಸಂಪುಟ–2 ಸಂಚಿಕೆ–02 ಪುಟಗಳು–6






ಮನೆಗಳ ಮೂಲೆಗಳಲ್ಲಿ ಮಣ್ಣಿನ ಮಡಿಕೆಯಂತಹ ಗೂಡು ಕಟ್ಟುವ 'ಕುಂಬಾರ ಕಣಜ' ಅಥವಾ ಕಂಚಿಕಾರ ಹುಳ ಸಂಪೂರ್ಣ ಶಾಂತ ಸ್ವಭಾವದ ಪರಿಸರ ಸ್ನೇಹಿ ಕೀಟವಾಗಿದೆ. ಇವು ಹಾನಿಕಾರಕ ಕೀಟಗಳನ್ನು ನಿಯಂತ್ರಿಸುವ ಮೂಲಕ ಪ್ರಕೃತಿಯ ಸಮತೋಲನ ಕಾಪಾಡಲು ಸಹಾಯ ಮಾಡುತ್ತವೆ. ಹಾಗಾಗಿ ಇವುಗಳಿಂದ ಯಾವುದೇ ಅಪಾಯವಿಲ್ಲ, ಇವುಗಳ ಗೂಡನ್ನು ನಾಶಮಾಡದೆ ರಕ್ಷಿಸಬೇಕು. ಒಂದು ವೇಳೆ ಇವು ಕಚ್ಚಿದರೆ ಗಾಬರಿಪಡಬೇಕಿಲ್ಲ. ಆ ಜಾಗವನ್ನು ಸಾಬೂನು ಮತ್ತು ನೀರಿನಿಂದ ತೊಳೆದು, ಐಸ್ ಅಥವಾ ಸುಣ್ಣ ಹಚ್ಚಿದರೆ ನೋವು ಮತ್ತು ಊತ ಬೇಗನೆ ಶಮನವಾಗುತ್ತದೆ. ಪ್ರಕೃತಿಯ ಈ ಅದ್ಭುತ ಪುಟಾಣಿ ಜೀವಿಗಳನ್ನು ಉಳಿಸೋಣ.

## ಜನರ ಅಚಲ ವಿಶ್ವಾಸ ಮತ್ತು ಬೆಂಬಲವೇ ನನ್ನ ಶಕ್ತಿ –ಪ್ರಧಾನಿ ಮೋದಿ



**ನವದೆಹಲಿ:** ಸಾರ್ವಜನಿಕ ಜೀವನದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಾ 25 ವರ್ಷಗಳನ್ನು ಪೂರೈಸಿರುವ ಸಂಭ್ರಮದಲ್ಲಿರುವ ಪ್ರಧಾನಿ ನರೇಂದ್ರ ಮೋದಿ, ಕೋಟಿಗಟ್ಟಲೆ ಜನರ ಅಚಲ ವಿಶ್ವಾಸ ಮತ್ತು ಬೆಂಬಲವೇ ತಮ್ಮ ಅತ್ಯಂತ ದೊಡ್ಡ ಶಕ್ತಿ ಎಂದು ಬಣ್ಣಿಸಿದ್ದಾರೆ. ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 'ವಿಕಸಿತ ಭಾರತ್ ಸಂಕಲ್ಪ ಸಭಾ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಪರಿವರ್ತಿಸುವ ಗುರಿಯನ್ನು ಸಾಕಾರಗೊಳಿಸಲು ಇದು ವಿಶ್ರಾಂತಿ ಪಡೆಯುವ ಸಮಯವಲ್ಲ, ಬದಲಾಗಿ ಇನ್ನಷ್ಟು ಕಠಿಣ ಪರಿಶ್ರಮ ಪಡುವ **3ನೇ ಪುಟಕ್ಕೆ**

## ನೈಸ್ ಯೋಜನೆ ನನ್ನ ಕೂಸಾದರೆ ಸೂಲಗಿತ್ತಿ ಯಾರು –ಎಚ್‌ಡಿಡಿ



**ಹಾಸನ:** ನೈಸ್ ಯೋಜನೆ ತಮ್ಮ ಕೊಡುಗೆ ಎಂದು ಟೀಕಿಸುವವರಿಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ಮಾರ್ಮಿಕವಾಗಿ ತಿರುಗೇಟು ನೀಡಿದ್ದು, "ನೈಸ್ ದೇವೇಗೌಡರ ಕೂಸು ಅಂತಾರೆ, ಕೂಸು ಎಂದ ಮೇಲೆ ಸೂಲಗಿತ್ತಿ ಯಾರು ಎಂಬುದನ್ನೂ ಹೇಳಬೇಕಲ್ಲ" ಎಂದು ವ್ಯಂಗ್ಯವಾಡಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 1995ರಲ್ಲಿ ಅಂದಿನ ಪ್ರಧಾನಿ ಪಿ.ವಿ. ನರಸಿಂಹರಾವ್ ಸರ್ಕಾರದ ಅವಧಿಯಲ್ಲಿ ಮನಮೋಹನ್ ಸಿಂಗ್ ಜಾರಿಗೆ ತಂದ ಆರ್ಥಿಕ ಹಾಗೂ ಕೈಗಾರಿಕಾ ನೀತಿಯ ಹಿನ್ನೆಲೆಯಲ್ಲಿ ಅಮೆರಿಕದ ಎರಡು ಮತ್ತು ಭಾರತದ ಒಂದು ಕಂಪನಿ ಮುಂದೆ ಬಂದಿದ್ದವು ಹಾಗೂ ಆ ಸಂಬಂಧ ಒಪ್ಪಂದಕ್ಕೆ ಸಹಿ **3ನೇ ಪುಟಕ್ಕೆ**

## ನಂದಿನಿ ಹಾಲಿನ ಬೆಲೆ ಏರಿಕೆ: ರೈತರಿಗೆ ವರ, ಗ್ರಾಹಕರಿಗೆ ಭಾರ?



**ಮಂಗಳೂರು:** ಕರ್ನಾಟಕದಲ್ಲಿ ನಂದಿನಿ ಹಾಲಿನ ದರವನ್ನು ಪ್ರತಿ ಲೀಟರ್‌ಗೆ ಎಂಟು ರೂಪಾಯಿಗಳಷ್ಟು ಭರ್ಜರಿಯಾಗಿ ಹೆಚ್ಚಿಸಲು ಸಂಪುಟ ಒಪ್ಪಿಗೆ ನೀಡಿರುವ ನಿರ್ಣಯವು ರಾಜ್ಯದ ಜನಸಾಮಾನ್ಯರ ಹಾಗೂ ಹೈನುಗಾರರ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಬೆಲೆಯೇರಿಕೆಯ ಬಿಸಿ ಅನುಭವಿಸುತ್ತಿರುವ ಮಧ್ಯಮ ವರ್ಗದ ಜನರಿಗೆ ಈ ನಿರ್ಧಾರ ಗಾಯದ ಮೇಲೆ ಬರೆ ಎಳೆದಂತೆ ಭಾಸವಾದರೆ, ಸಂಕಷ್ಟದಲ್ಲಿರುವ ರೈತರಿಗೆ ಇದು ಕೊಂಚ ಆಸರೆಯಾಗಲಿದೆ ಎಂಬ **3ನೇ ಪುಟಕ್ಕೆ**










## ನಂದಿನಿ ಹಾಲಿನ ಬೆಲೆ ಏರಿಕೆ: ರೈತರಿಗೆ ವರ, ಗ್ರಾಹಕರಿಗೆ ಭಾರ?

ಒಂದನೇ ಪುಟದಿಂದ......

ವಾದವೂ ಕೇಳಿಬರುತ್ತಿದೆ. ಈ ಮಹತ್ವದ ನಿರ್ಧಾರದ ಸಮಗ್ರ ಅವಲೋಕನ ಇಲ್ಲಿದೆ. ಹೈನುಗಾರಿಕೆಯೇ ಲಕ್ಷಾಂತರರೈತರ ಕುಟುಂಬಗಳಿಗೆ ಮುಖ್ಯ ಜೀವನಾಧಾರವಾಗಿದೆ. ಉತ್ಪಾದನಾ ವೆಚ್ಚ, ಮೇವಿನ ಬೆಲೆ ಮತ್ತು ಜಾನುವಾರಗಳ ನಿರ್ವಹಣಾ ವೆಚ್ಚ ವಿಪರೀತವಾಗಿ ಹೆಚ್ಚಿರುವ ಹಿನ್ನೆಲೆಯಲ್ಲಿ, ಈ ದರಏರಿಕೆಯಿಂದ ಬರುವ ಹೆಚ್ಚುವರಿ ಲಾಭದ ಸಿಂಹಪಾಲು ನೇರವಾಗಿರೈತರ ಕೈ ಸೇರಲಿದ್ದು, ಹೈನುಗಾರಿಕೆ ಲಾಭದಾಯಕವಾಗಲು ನೆರವಾಗಲಿದೆ. ಬೆಲೆ ಕುಸಿತ ಅಥವಾ ನಷ್ಟದ ಭೀತಿಯಿಂದರೈತರು ಹೈನುಗಾರಿಕೆಯಿಂದ ವಿಮುಖರಾಗುವುದನ್ನು ತಪ್ಪಿಸಲು ಇದು ಸಹಕಾರಿಯಾಗಿದೆ. ಹಾಲಿಗೆ ಸರಿಯಾದ ಬೆಲೆ ಸಿಕ್ಕಾಗ ಉತ್ಪಾದನೆ ಹೆಚ್ಚಾಗಿ, ರಾಜ್ಯದಲ್ಲಿ ಹಾಲು ಸರಬರಾಜಿನ ಕೊರತೆ ಉಂಟಾಗದಂತೆ ತಡೆಯಬಹುದು. ಇದರೊಂದಿಗೆ ಕೆಎಂಎಫ್ ಹಾಗೂ ಜಿಲ್ಲಾ ಹಾಲು ಒಕ್ಕೂಟಗಳು ಆರ್ಥಿಕವಾಗಿ ಸದೃಢಗೊಂಡು, ಗುಣಮಟ್ಟದ ನಿರ್ವಹಣೆ ಹಾಗೂ ರೈತರಿಗೆ ನೀಡುವ ಸೌಲಭ್ಯಗಳನ್ನು ಕಾಲಕಾಲಕ್ಕೆ ಕಲ್ಪಿಸಲು ಅನುಕೂಲವಾಗುತ್ತದೆ. ಮತ್ತೊಂದೆಡೆ, ಈಗಾಗಲೇ ಅಡುಗೆ ಎಣ್ಣೆ, ತರಕಾರಿ, ಇಂಧನ ಸೇರಿದಂತೆ ದಿನ ಬಳಕೆಯ ಎಲ್ಲಾ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಹಾಲಿನ ದರದಲ್ಲಿ ಏಕಾಏಕಿ ಏರಿಕೆಯಾಗುತ್ತಿರುವುದು ಗರಿಷ್ಠ ಆರ್ಥಿಕ ಹೊರೆಯನ್ನು ಸೃಷ್ಟಿಸಲಿದೆ. ಮಧ್ಯಮ ಮತ್ತು ಬಡ ವರ್ಗದ ಕುಟುಂಬಗಳಿಗೆ ಹಾಲು ಅತ್ಯಗತ್ಯ ಆಹಾರ ಪದಾರ್ಥವಾಗಿರುವುದರಿಂದ, ಪ್ರತಿದಿನವೂ ಬೇಕಾಗುವ ಹಾಲಿನ ಬೆಲೆ ಗಗನಕ್ಕೇರುವುದು ಕುಟುಂಬಗಳ ಮಾಸಿಕ ಬಜೆಟ್ ಅನ್ನು ಸಂಪೂರ್ಣವಾಗಿ ಅಸ್ತವ್ಯಸ್ತಗೊಳಿಸುತ್ತದೆ. ಅಷ್ಟೇ ಅಲ್ಲದೆ, ಹಾಲನ್ನು ಕಚ್ಚಾವಾಗಿ ಬಳಸುವ ಮೊಸರು, ಮಜ್ಜಿಗೆ, ತುಪ್ಪ, ಬೆಣ್ಣೆ ಮತ್ತು ಸಿಹಿತಿಂಡಿಗಳ ದರವೂ ಸಹ ಕಾಲಾನುಕ್ರಮದಲ್ಲಿ ಹೆಚ್ಚಾಗುವ ಸಂಭವವಿದ್ದು, ಇದು ಒಟ್ಟಾರೆ ಹಣದುಬ್ಬರವನ್ನು ಮತ್ತಷ್ಟು ಹೆಚ್ಚಿಸಲಿದೆ.

## ನೈಸ್ ಯೋಜನೆ ನನ್ನ ಕೂಸಾದರೆ ಸೂಲಗಿತ್ತಿಯಾರು –ಎಚ್‌ಡಿಡಿ

ಒಂದನೇ ಪುಟದಿಂದ......

ಹಾಕಲಾಗಿತ್ತು ಎಂದು ವಿವರಿಸಿದರು. ಇದೇ ವೇಳೆ ತಮ್ಮ ಆರೋಗ್ಯದ ಕುರಿತು ಮಾತನಾಡುತ್ತಾ, ತಮಗೆ ಕಿಡ್ನಿ ವೈಫಲ್ಯವಾಗಿ ಡಯಾಲಿಸಿಸ್ ಮಾಡಿಸಿಕೊಳ್ಳುತ್ತಿರುವುದಾಗಿ ತಿಳಿಸಿದ ಅವರು, ಆದರೆ ಮೆದುಳು ಫೇಲ್ ಆಗಿಲ್ಲ ಎಂದರು. ಪಿತೃಪಕ್ಷದ ಬಳಿಕ ಸಕ್ರಿಯ ರಾಜಕಾರಣಕ್ಕೆ ಮರಳಿ ರಾಜ್ಯಾದ್ಯಂತ ಪ್ರವಾಸ ಮಾಡುವುದಾಗಿ ತಿಳಿಸಿದ ದೇವೇಗೌಡರು, ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ವಿರುದ್ಧ ಬಿಜೆಪಿ–ಜೆಡಿಎಸ್ ಒಗ್ಗಟ್ಟಾಗಿ ಹೋರಾಡಲಿವೆ ಎಂದು ಸ್ಪಷ್ಟಪಡಿಸಿದರು. ಇದೇ ಸಂದರ್ಭದಲ್ಲಿ ರೈತರ ಪರತಮ್ಮ ಹೋರಾಟಗಳ ಕುರಿತು ಮಾತನಾಡುತ್ತಾ, 1991ರಿಂದ 2025ರವರೆಗೆ ಸಂಸತ್ತಿನಲ್ಲಿ ತಾವು ಮಾಡಿದ ಭಾಷಣಗಳು ಹಾಗೂ ರೈತರ ಪರ ಹೋರಾಟಗಳನ್ನು ಒಗ್ಗೂಡಿಸಿ 'ನೇಗಿಲ ಗೆರೆಗಳು' ಹೆಸರಿನಲ್ಲಿ ಎರಡು ಪುಸ್ತಕಗಳನ್ನು ಸಿದ್ಧಪಡಿಸಲಾಗಿದೆ ಎಂದರು.

## ಜನರ ಅಚಲ ವಿಶ್ವಾಸ ಮತ್ತು ಬೆಂಬಲವೇ ನನ್ನ ಶಕ್ತಿ– ಪ್ರಧಾನಿ ಮೋದಿ

ಒಂದನೇ ಪುಟದಿಂದ......

ಸಮಯ ಎಂದು ಕರೆ ನೀಡಿದ್ದಾರೆ. ಸರ್ಕಾರದ ಮುಖ್ಯಸ್ಥನಾಗಿ ದೇಶದ ಸೇವೆ ಮಾಡುತ್ತಾ ಕಾಲು ಶತಮಾನವನ್ನು ಪೂರೈಸಿರುವುದು ಜನರ ಅಪಾರ ಆಶೀರ್ವಾದದ ಫಲ ಎಂದ ಪ್ರಧಾನಿ, ಇದಕ್ಕಾಗಿ ದೇಶದ ಕೋಟ್ಯಂತರ ನಾಗರಿಕರ ಮುಂದೆ ತಲೆಬಾಗಿ ನಮಸ್ಕರಿಸುವುದಾಗಿ ತಿಳಿಸಿದರು. ತಮ್ಮ ಸಂಪೂರ್ಣರಾಜಕೀಯ ಪಯಣದಲ್ಲಿ ನಾಗರಿಕರ ನಂಬಿಕೆ ತಮಗೆದೊಡ್ಡ ಆಧಾರವಾಗಿದೆ ಎಂದು ಸ್ಮರಿಸಿದ ಅವರು, ಎನ್ಡಿಎ ಒಕ್ಕೂಟದ ಸಹೋದ್ಯೋಗಿಗಳಿಗೆ ಹಾಗೂ ಪ್ರಜಾಪ್ರಭುತ್ವದ ಬಗ್ಗೆ ಗೌರವ ಹೊಂದಿರುವ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು. ರಾಜ್ಯ ವಿಧಾನ ಸಭೆಗಳು ಮತ್ತು ಲೋಕಸಭೆ ಚುನಾವಣೆಯಲ್ಲಿ ಜನರು ನಿರಂತರವಾಗಿ ತಮ್ಮ ಸೇವೆಗೆ ಅವಕಾಶ ನೀಡಿರುವುದನ್ನು ಸ್ಮರಿಸುತ್ತಾ, ಭಾರತದ ಪ್ರಜಾಪ್ರಭುತ್ವ ಮತ್ತು ಸಂವಿಧಾನಕ್ಕೆ ಅಪಾರ ಗೌರವ ಸಲ್ಲಿಸುವುದಾಗಿ ಹೇಳಿದರು. ದೇಶದ ಮುಂದಿರುವ ಸವಾಲುಗಳು ಹಾಗೂ ಪರಿಹಾರಗಳ ಕುರಿತು ಮಾತನಾಡಿದ ಅವರು, ನಮ್ಮ ದೇಶದಲ್ಲಿ ಸಮಸ್ಯೆಗಳಿದ್ದರೆ, ನಮ್ಮ ಬಳಿ 140 ಕೋಟಿ ಜನಸಂಖ್ಯೆಯ ರೂಪದಲ್ಲಿ ಅದಕ್ಕೆ ಸೂಕ್ತ ಪರಿಹಾರಗಳೂ ಇವೆ ಎಂದರು. ಇದು ದೃಢ ನಿಶ್ಚಯದಿಂದ ಮುನ್ನಡೆಯುವ ಮತ್ತು ರಾಷ್ಟ್ರ ಸೇವೆಗೆ ಸಂಪೂರ್ಣವಾಗಿ ಅರ್ಪಿಸಿಕೊಳ್ಳುವ ಸಮಯ ಎಂದು ಅಭಿಪ್ರಾಯ ಪಟ್ಟರು. ತಮ್ಮ ರಾಜಕೀಯ ಜೀವನದ ಏಳು–ಬೀಳುಗಳನ್ನು ಮೆಲುಕು ಹಾಕಿದರು.

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ : ಅರ್ಜಿ ಆಹ್ವಾನ

ಮಂಗಳೂರು – ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು/ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಗ್ರಾಮ–1 ಕೇಂದ್ರದ ಮೂಲಕ ಅಕ್ಟೋಬರ್ 31 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಂ.ಎನ್.ಅನುಚೇತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇವಿನ ಬೀಜ ಕಿರು ಪೊಟ್ಟಣ ವಿತರಣೆಗೆ ಅರ್ಜಿ ಆಹ್ವಾನ

ಮಂಗಳೂರು – ಪ್ರಸ್ತುತ ಸಾಲಿನಲ್ಲಿ ರಾಜ್ಯದಲ್ಲಿ ಮಳೆ ಪ್ರಮಾಣ ತೀರಾ ಕಡಿಮೆ ಆಗಿರುವುದರಿಂದ ಜಾನುವಾರುಗಳಿಗೆ ಎದುರಾಗಬಹುದಾದ ಮೇವಿನ ಕೊರತೆಯನ್ನು ನೀಗಿಸಲು ಸರ್ಕಾರ ರೈತರಿಗೆ ಮೇವಿನ ಬೀಜಗಳನ್ನು ಉಚಿತವಾಗಿ ಪೂರೈಸಲು ಕ್ರಮವಹಿಸಲಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಗೆ 4586 ಮೇವಿನ ಬೀಜ ಕಿರುಪೊಟ್ಟಣಗಳನ್ನು ಪೂರೈಕೆಯಾಗಲಿದ್ದು, ಜಮೀನು ಮತ್ತು ನೀರಿನ ಮೂಲ ಹೊಂದಿರುವ ಹಾಗೂ ಜಾನುವಾರು ಸಾಗಾಣಿಕೆ ಮಾಡುತ್ತಿರುವ ಆಸಕ್ತ ರೈತರು ತಮ್ಮ ಹತ್ತಿರದ ಪಶುವೈದ್ಯಕೀಯ ಸಂಸ್ಥೆಗೆ ಭೇಟಿ ನೀಡಿ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವಂತೆ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಕಲಾ ಪ್ರತಿಭೋತ್ಸವ–2026' ಸ್ಪರ್ಧೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಿವಮೊಗ್ಗ ವತಿಯಿಂದ ನವೆಂಬರ್ ಮಾಹೆಯಲ್ಲಿ ಜಿಲ್ಲಾ ಮಟ್ಟದ 'ಕಲಾ ಪ್ರತಿಭೋತ್ಸವ' ವಿವಿಧ ಕಲಾಪ್ರಕಾರಗಳ ಸ್ಪರ್ಧಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 31ರ ಸಂಜೆ 5–30ರೊಳಗಾಗಿ 'ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾ ಖೆ, ಕುವೆಂಪು ರಂಗಮಂದಿರ, ಶಿವಮೊಗ್ಗ' ಈ ವಿಳಾಸಕ್ಕೆ ಸಲ್ಲಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ್ ಹೆಚ್ ತಿಳಿಸಿದ್ದಾರೆ.

## ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕಕ್ಕಾಗಿ ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ತಾಲೂಕು ಮೆಸ್ಕಾಂ ಗ್ರಾಮೀಣ ಉಪವಿಭಾಗದ ವ್ಯಾಪ್ತಿಗೆ ಒಳಪಡುವ ಪ.ಜಾತಿ/ಪ.ಪಂಗಡಕ್ಕೆ ಸೇರಿರುವ ರೈತರು ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯಡಿ 2026–27ನೇ ಸಾಲಿಗೆ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದು. ಉದ್ದೇಶಿತ ಪಂಪ್ ಸೆಟ್ ಇರುವ ಸರ್ವೆ ನಂಬರ್ ಜಮೀನಿನಲ್ಲಿ ಈ ಹಿಂದೆ ಗಂಗಾ ಕಲ್ಯಾಣ, ಎಸ್‌ಸಿಪಿ/ಟಿಎಸ್‌ಪಿ ಅಥವಾ ಸರ್ಕಾರದ ಯಾವುದೇ ಯೋಜನೆಯಡಿ ವಿದ್ಯುತ್ ಸಂಪರ್ಕ ಪಡೆಯದಿರುವ ಫಲಾನುಭವಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

## ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

ಮಡಿಕೇರಿ : ಪ್ರಸಕ್ತ (2026–27) ಸಾಲಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡದ ಜಾತಿಯ ಜನರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯಾಯ ನಿಗಮದ ವ್ಯಾಪ್ತಿಯಲ್ಲಿ ಬರುವ ಸಮುದಾಯಗಳು ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://sevasindhu.karnataka.gov.in ಆಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ : 8050854061ನ್ನು ಸಂಪರ್ಕಿಸಬಹುದು.

## ಸಹಾಯಧನ ಅರ್ಜಿ ಆಹ್ವಾನ

ಮಡಿಕೇರಿ – ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ ವತಿಯಿಂದ 2026–27ನೇ ಸಾಲಿನ ಕ್ರಿಶ್ಚಿಯನ್ ಜನಾಂಗದವರಿಗೆ ಅರಿವು, ಫಾಸ್ಟ್ ಫುಡ್ ಟ್ರಕ್, ಸ್ವ ಸಹಾಯ ಸಂಘಗಳಿಗೆ ಸಹಾಯಧನ ಯೋಜನೆಯಡಿ ಸಾಲ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ.: 08272–201449ನ್ನು ಸಂಪರ್ಕಿಸಬಹುದು.

## ಶ್ರೀಮತಿ ವೈದೇಹಿ ಅವರಿಗೆ ಕಾರಂತ ಪ್ರಶಸ್ತಿ ಪ್ರದಾನ




ಮಂಗಳೂರು : ಕಡಲ ತೀರದ ಭಾರ್ಗವ, ಖ್ಯಾತ ಸಾಹಿತಿ ಕೋಟ ಶಿವರಾಮ ಕಾರಂತರ 123ನೇ ಹುಟ್ಟು ಹಬ್ಬದ ಸಲುವಾಗಿ ಕಲ್ಕೂರ ಪ್ರತಿಷ್ಠಾನದಿಂದ ನೀಡಲಾಗುವ "ಕಾರಂತ ಪ್ರಶಸ್ತಿ–2026"ನ್ನು ಹಿರಿಯ ಮಹಿಳಾ ಸಾಹಿತಿ, ಕಾದಂಬರಿಕಾರ್ತಿ ವೈದೇಹಿಯವರಿಗೆ ಪ್ರದಾನ ಮಾಡಲಾಗುವುದು ಎಂದು ಕಾರಂತ ಸಮಿತಿಯ ಪರವಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಹಾಗೂ ಕಲ್ಕೂರ ಪ್ರತಿಷ್ಠಾನದ ಅಧ್ಯಕ್ಷ ಎಸ್. ಪ್ರದೀಪ ಕುಮಾರ ಕಲ್ಕೂರ ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ಪ್ರಶಸ್ತಿ ಪ್ರದಾನ ಸಮಾರಂಭವು ಅಕ್ಟೋಬರ್ 10 ಶನಿವಾರ ಮಂಗಳೂರಿನ ಪತ್ತುಮುಡಿ ಸೌಧದ ಸಭಾಂಗಣದಲ್ಲಿ ದಿವಂಗತ ಪತ್ತುಮುಡಿ ಸೂರ್ಯನಾರಾಯಣ ರಾವ್ ಸಂಸ್ಮರಣೆಯೊಂದಿಗೆ ಜರಗಲಿರುವುದು. ಹಂಪಿ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಪ್ರೊ। ಬಿ.ಎ. ವಿವೇಕ ರೈ ಕಾರಂತರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಕಾರಂತ ಸಂಸ್ಮರಣೆ ಗೈಯ್ಯುವರು. ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ। ಪಿ.ಎಲ್. ಧರ್ಮ ಕಾರಂತ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ತಿಳಿಸಿದರು. ಪ್ರಬಂಧ ಸ್ಪರ್ಧೆ ವಿಜೇತರಿಗೆ ಹಿರಿಯ ಸಾಹಿತಿಗಳಾದ ಶ್ರೀಮತಿ ಭುವನೇಶ್ವರಿ ಹೆಗಡೆ ಬಹುಮಾನ ವಿತರಿಸಲಿದ್ದು, ಅಂತರಶಾಲೆಯಲ್ಲಿ ಕಾರಂತರ ಚಿತ್ರರಚನಾ ಸ್ಪರ್ಧೆಯ ವಿಜೇತರಿಗೆ ಕರ್ನಾಟಕ ಬ್ಯಾಂಕಿನ ಆಡಳಿತ ನಿರ್ದೇಶಕರು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಘವೇಂದ್ರ ಎಸ್. ಭಟ್, ಬಹುಮಾನ ವಿತರಿಸುವರು.

## ಮಂಗಳೂರಿನಲ್ಲಿ ಭಾರತ್ ಪೆಟ್ರೋಲಿಯಂ ಆಟೋಕ್ರಾಸ್



ಮಂಗಳೂರು : ಮಂಗಳೂರು ಮೋಟಾರ್ ಸ್ಪೋರ್ಟ್ಸ್ ಅಸೋಸಿಯೇಷನ್ (MMSA) ಹಾಗೂ ಇಂಡಿಯನ್ ಮೋಟಾರ್ ಸ್ಪೋರ್ಟ್ಸ್ ಕ್ಲಬ್ (IMSC) ಜಂಟಿಯಾಗಿ ನಗರದ 'ಗೋಲ್ಡ್ ಫಿಂಚ್ ಸಿಟಿ' ಮೈದಾನದಲ್ಲಿ 'ಭಾರತ್ ಪೆಟ್ರೋಲಿಯಂ ಆಟೋಕ್ರಾಸ್' ಚಾಂಪಿಯನ್‌ಶಿಪ್ ಅನ್ನು ಆಯೋಜಿಸಿಲಾಗಿದೆ ಎಂದು ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಂಗಳೂರು ಮೋಟಾರ್ ಸ್ಪೋರ್ಟ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಸುದೀಪ್ ಬಿ.ಕೆ. ತಿಳಿಸಿದರು. ಚಿಕ್ಕಮಗಳೂರು, ಕೂರ್ಗ್, ಮೈಸೂರು, ಬೆಂಗಳೂರು, ಮುಲ್ಕಿ, ಮೂಡುಬಿದಿರೆ, ಕಾರ್ಕಳ, ಶಿವಮೊಗ್ಗ ಹಾಗೂ ಗೋವಾದಿಂದ ಚಾಲಕರು ಆಸಕ್ತಿ ತೋರಿಸಿದ್ದು, ಸುಮಾರು 100 ರಿಂದ 175ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸುವ ನಿರೀಕ್ಷೆಯಿದೆ. ಸ್ಪರ್ಧೆಗೆ 1.1 ಕಿಲೋಮೀಟರ್ ಉದ್ದದ ಕಠಿಣ ಹಾಗೂ ಸುರಕ್ಷಿತ ಟ್ರ್ಯಾಕ್ ಸಿದ್ಧಪಡಿಸಲಾಗಿದೆ ಎಂದರು. ಸ್ಪರ್ಧೆಯಲ್ಲಿ ಅತ್ಯಂತ ವೇಗವಾಗಿ ಕಾರು ಚಾಲನೆ ಮಾಡುವ ಮಹಿಳಾ ಸ್ಪರ್ಧಿಗೆ 'ವಿಶೇಷ ಮಹಿಳಾ ಟ್ರೋಫಿ' (Special Ladies Trophy) ನೀಡಲಾಗುತ್ತಿದ್ದು, ಸಾರ್ವಜನಿಕರಿಗೆ ಮತ್ತು ವೀಕ್ಷಕರಿಗೆ ಉಚಿತ ಪ್ರವೇಶ ಕಲ್ಪಿಸಲಾಗಿದೆ.

## ಎನ್‌ಐಟಿಕೆ ಸುರತ್ಕಲ್‌ನಲ್ಲಿ ಮಿಗ್–21 ಯುದ್ಧ ವಿಮಾನ ಅನಾವರಣ



ಸುರತ್ಕಲ್ : ಸುರತ್ಕಲ್‌ನ ರಾಷ್ಟ್ರೀಯ ತಾಂತ್ರಿಕ ಸಂಸ್ಥೆ (ಎನ್‌ಐಟಿಕೆ) ಆವರಣದ ಮುಖ್ಯ ಕಟ್ಟಡದ ಮುಂಭಾಗದಲ್ಲಿ ಸ್ಥಾಪಿಸಲಾದ ಭಾರತೀಯ ವಾಯುಪಡೆಯ ನಿವೃತ್ತ ಮಿಗ್–21 ಯುದ್ಧ ವಿಮಾನವನ್ನು ಅಧಿಕೃತವಾಗಿ ಅನಾವರಣಗೊಳಿಸಲಾಯಿತು. ರಾಷ್ಟ್ರೀಯ ಹೆದ್ದಾರಿ 66 ರಿಂದಲೂ ಸ್ಪಷ್ಟವಾಗಿ ಗೋಚರಿಸುವ ಈ ವಿಮಾನದ ಅನಾವರಣ ಸಮಾರಂಭದಲ್ಲಿ ಎನ್‌ಐಟಿಕೆ ಆಡಳಿತ ಮಂಡಳಿಯ ಅಧ್ಯಕ್ಷ ಶ್ರೀ ಎಂ.ಎಂ. ಮುರುಗಪ್ಪನ್, ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹಾಗೂ ಸಂಸ್ಥೆಯ ನಿರ್ದೇಶಕ ಪ್ರೊ. ಬಿ. ರವಿ ಪಾಲ್ಗೊಂಡಿದ್ದರು. ಈ ಕಾರ್ಯಕ್ರಮಕ್ಕೆ ಏರ್ ವಾರಿಯರ್ಸ್, ಸಶಸ್ತ್ರ ಪಡೆಗಳ ನಿವೃತ್ತ ಯೋಧರು, ಎನ್‌ಸಿಸಿ ಕೆಡೆಟ್‌ಗಳು, ಸಂಸ್ಥೆಯ ಅಧಿಕಾರಿಗಳು, ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಸಾಕ್ಷಿಯಾದರು. ಈ ಸಂದರ್ಭದಲ್ಲಿ ಮಾತನಾಡಿದ ಏರ್ ಮಾರ್ಷಲ್ ಬಿ.ಯು. ಚೆಂಗಪ್ಪ (ನಿವೃತ್ತ), ಈ ವಿಮಾನವು ಟ್ಯಾಂಡಂ ಕಾಕ್‌ಪಿಟ್ ಹೊಂದಿರುವ ಮಿಗ್–21ರ ಎರಡು ಆಸನಗಳ ತರಬೇತಿ ಆವೃತ್ತಿಯಾಗಿದ್ದು, ಆರ್–13 ಟರ್ಬೋಜೆಟ್ ಎಂಜಿನ್ ಮತ್ತು ಡೆಲ್ಟಾ ಆಕಾರದ ರೆಕ್ಕೆಗಳನ್ನು ಹೊಂದಿದೆ ಎಂದು ವಿವರಿಸಿದರು. ಸೆಪ್ಟೆಂಬರ್ 2025 ರವರೆಗೆ ಸಕ್ರಿಯ ಸೇವೆಯಲ್ಲಿದ್ದ ಈ ವಿಮಾನವು ಗನ್ ಪಾಡ್ ಹಾಗೂ ಬಾಂಬ್‌ಗಳನ್ನು ಹೊತ್ತು ಸಾಗುವ ಸಾಮರ್ಥ್ಯ ಹೊಂದಿತ್ತು.

## ಎಸ್‌ಜೆಇಸಿಯಲ್ಲಿ 'ಟಿಯಾರಾ '26' ಉತ್ಸವಕ್ಕೆ ಚಾಲನೆ



ಮಂಗಳೂರು: ಮಂಗಳೂರಿನ ವಾಮಂಜೂರಿನಲ್ಲಿರುವ ಸಂತ ಜೋಸೆಫ್ ಎಂಜಿನಿಯರಿಂಗ್ ಕಾಲೇಜಿನಲ್ಲಿ (ಎಸ್‌ಜೆಇಸಿ) "ಟೆಕ್, ಟ್ಯಾಲೆಂಟ್ & ಟ್ರಯಂಫ್" ಎಂಬ ಧ್ಯೇಯವಾಕ್ಯದೊಂದಿಗೆ ಆಯೋಜಿಸಲಾದ ಎರಡು ದಿನಗಳ 'ಟಿಯಾರಾ '26' (TIARA '26) ಟೆಕ್ನೋ–ಕಲ್ಚರಲ್ ಫೆಸ್ಟ್‌ಗೆ ಅಕ್ಟೋಬರ್ 6 ರಂದು ಚಾಲನೆ ನೀಡಲಾಯಿತು. ಕಾಲೇಜಿನ ಬಾಸ್ಕಟ್‌ಬಾಲ್ ಕೋರ್ಟ್‌ನಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸೆಕ್ಷನ್ ಇನ್ಫಿನೈಟ್ ಫೌಂಡೇಶನ್ (SI8)ನ ಸ್ಥಾಪಕ ನಿರ್ದೇಶಕರಾದ ಶ್ರೀ ವಿಶ್ವಾಸ್ ಯು.ಎಸ್. ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ, ಹಬ್ಬದ ಲೋಗೋ ಅನಾವರಣಗೊಳಿಸುವ ಮೂಲಕ ಉತ್ಸವಕ್ಕೆ ಚಾಲನೆ ನೀಡಿದರು. ಕುಮಾರಿ ಪ್ರಾಚಿ ಮತ್ತು ಶ್ರೀ ಆಶರ್ ಪಿಂಟೋ ಅವರ ನಿರೂಪಣೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ, ಸಹಾಯಕ ನಿರ್ದೇಶಕರಾದ ರೆ. ಫಾ. ಕೆನ್ನೆತ್ ಆರ್. ಕ್ರಾಸ್ತಾ ಅವರು ಮುಖ್ಯ ಅತಿಥಿಗಳನ್ನು ಪುಷ್ಪಗುಚ್ಛ ನೀಡಿ ಸ್ವಾಗತಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಮುಖ್ಯ ಅತಿಥಿ ಶ್ರೀ ವಿಶ್ವಾಸ್ ಯು.ಎಸ್. ಯುವ ಪೀಳಿಗೆಯನ್ನು ರೂಪಿಸುವಲ್ಲಿ ಸಮಾಜದ ಜವಾಬ್ದಾರಿಯನ್ನು ಒತ್ತಿ ಹೇಳಿದರು.

## ಧರ್ಮಸ್ಥಳದಲ್ಲಿ 28ನೇ ವರ್ಷದ ಭಜನಾ ಕಮ್ಮಟ ಸಮಾರೋಪ




ಉಜಿರೆ: ಭಜನೆಯು ಭಗವಂತನ ಅನುಗ್ರಹ ಪಡೆಯಲು ಅತ್ಯಂತ ಸರಳ ಮಾರ್ಗವಾಗಿದ್ದು, ಇದರಿಂದ ಸಾತ್ವಿಕ ಶಕ್ತಿ ಜಾಗೃತವಾಗಿ ನೈತಿಕ ಮತ್ತು ಆರೋಗ್ಯಪೂರ್ಣ ಸಮಾಜ ನಿರ್ಮಾಣವಾಗುತ್ತದೆ ಎಂದು ಮೈಸೂರಿನ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹೇಳಿದರು. ಧರ್ಮಸ್ಥಳದ ಅಮೃತವರ್ಷಿಣಿ ಸಭಾಭವನದಲ್ಲಿ ಜರುಗಿದ 28 ನೇ ವರ್ಷದ ಭಜನಾ ಕಮ್ಮಟದ ಸಮಾರೋಪ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು. ನಾಡು–ವಿದೇಶಗಳಲ್ಲಿ ಅನೇಕ ಸಾಧು–ಸಂತರು ಹಾಗೂ ಭಕ್ತರು ಶ್ರದ್ಧಾ–ಭಕ್ತಿಯ ಭಜನೆಯ ಮೂಲಕ ದೈವಕೃಪೆಗೆ ಪಾತ್ರರಾಗಿದ್ದಾರೆ ಎಂದ ಸ್ವಾಮೀಜಿಯವರು, ಹಲವು ಜನಮಂಗಳ ಕಾರ್ಯಗಳನ್ನು ನಡೆಸುತ್ತಿರುವ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರನ್ನು 'ರಾಜರ್ಷಿ' ಎಂದು ಶ್ಲಾಘಿಸಿದರು.

## ಫಾದರ್ ಮುಲ್ಲರ್ ನರ್ಸಿಂಗ್ ಕಾಲೇಜಿನ ರೂಬಿ ಜುಬಿಲಿ



ಮಂಗಳೂರು : ಶುಶ್ರೂಷಾ ಶಿಕ್ಷಣ ಮತ್ತು ಸೇವೆಯಲ್ಲಿ ನಾಲ್ಕು ದಶಕಗಳ ಸುದೀರ್ಘ ಯಶೋಗಾಥೆ ಬರೆದಿರುವ ಮಂಗಳೂರಿನ ಫಾದರ್ ಮುಲ್ಲರ್ ನರ್ಸಿಂಗ್ ಕಾಲೇಜು (FMCON) ತನ್ನ 'ರೂಬಿ ಜುಬಿಲಿ' (40ನೇ ವರ್ಷದ ಆಚರಣೆ) ವರ್ಷಕ್ಕೆ ವಿಜೃಂಭಣೆಯಿಂದ ಪದಾರ್ಪಣೆ ಮಾಡಿದೆ. ಇದೇ ಶುಭ ಸಂದರ್ಭದಲ್ಲಿ 2026–27ನೇ ಶೈಕ್ಷಣಿಕ ಸಾಲಿನ 40ನೇ ಬಿ.ಎಸ್ಸಿ ನರ್ಸಿಂಗ್, 39ನೇ ಪಿ.ಬಿ.ಬಿ.ಎಸ್ಸಿ ನರ್ಸಿಂಗ್ ಹಾಗೂ 35ನೇ ಎಂ.ಎಸ್ಸಿ ನರ್ಸಿಂಗ್ ಕೋರ್ಸ್‌ಗಳ ನೂತನ ಬ್ಯಾಚ್‌ಗಳ ಔಪಚಾರಿಕ ಉದ್ಘಾಟನಾ ಸಮಾರಂಭವೂ ನೆರವೇರಿತು. ಈ ಸಮಾರಂಭದಲ್ಲಿ ಸಂಸ್ಥೆಯ 40 ವರ್ಷಗಳ ವೈಭವೋಪೇತ ಪಯಣವನ್ನು ಪ್ರತಿನಿಧಿಸುವ 40 ಮಂದಿ ಹಳೆಯ ವಿದ್ಯಾರ್ಥಿಗಳು (ಅಲುಮ್ನಿ) ಆಕರ್ಷಕ ಮೆರವಣಿಗೆ ನಡೆಸಿ ಕಾರ್ಯಕ್ರಮಕ್ಕೆ ಶುಭಾರಂಭ ನೀಡಿದರು. ಪ್ರಥಮ ವರ್ಷದ ಬಿ.ಎಸ್ಸಿ ನರ್ಸಿಂಗ್ ವಿದ್ಯಾರ್ಥಿನಿಯರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಸಂಸ್ಥೆಯ ನಿರ್ದೇಶಕರಾದ ರೆ. ಫಾ. ಫಾಸ್ಟಿನ್ ಲೂಕಾಸ್ ಲೋಬೋ ಸ್ವಾಗತಿಸಿದರು. ಗಣ್ಯರು ದೀಪ ಬೆಳಗಿಸುವುದರ ಮೂಲಕ ನೂತನ ಶೈಕ್ಷಣಿಕ ವರ್ಷ ಹಾಗೂ ರೂಬಿ ಜುಬಿಲಿ ಸಂಭ್ರಮಕ್ಕೆ ಚಾಲನೆ ನೀಡಿದರು.

## ಪಿಲಿಕುಳದಲ್ಲಿ ವಿಶ್ವ ಬಾಹ್ಯಾಕಾಶ ಸಪ್ತಾಹ ಉದ್ಘಾಟನೆ



ಮಂಗಳೂರು: ಮಂಗಳೂರಿನ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರಿನ ಯು.ಆರ್. ರಾವ್ ಉಪಗ್ರಹ ಕೇಂದ್ರ ಹಾಗೂ ಇಸ್ರೋ ಸಹಯೋಗದೊಂದಿಗೆ ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಬಾಹ್ಯಾಕಾಶ ಸಪ್ತಾಹ ಉದ್ಘಾಟನಾ ಸಮಾರಂಭ ಬುಧವಾರ ನಡೆಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಯು.ಆರ್. ರಾವ್ ಉಪಗ್ರಹ ಕೇಂದ್ರದ ಉಪನಿರ್ದೇಶಕ ಡಾ. ಸಿ.ಎಸ್. ಮಧುಸೂದನ್, ವಿದ್ಯಾರ್ಥಿಗಳಲ್ಲಿ ಪ್ರಶ್ನಿಸುವ, ಪರಿಶೀಲಿಸುವ ಹಾಗೂ ಸಾಕ್ಷ್ಯಾಧಾರಿತವಾಗಿ ಚಿಂತಿಸುವ ಮನೋಭಾವ ಬೆಳೆಯಬೇಕು ಎಂದರು. ತಂತ್ರಜ್ಞಾನವನ್ನು ಮಿತವಾಗಿ ಬಳಸಿ, ಪುಸ್ತಕದಲ್ಲಿದ್ದ ವಿದ್ಯೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕೆಂದು ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಎನ್.ಐ.ಟಿ.ಕೆ ಸುರತ್ಕಲ್‌ನ ನಿವೃತ್ತ ಪ್ರಾಧ್ಯಾಪಕ ಪ್ರೊ. ಜಿ. ಶ್ರೀನಿಕೇತನ್ ಮಾತನಾಡಿ, ರಾಕೆಟ್ ತಂತ್ರಜ್ಞಾನದ ನಿರಂತರ ಸಂಶೋಧನೆ ಮತ್ತು 'ರಾಕೆಟ್ ಕ್ರಾಂತಿ'ಯಿಂದಾಗಿ ಭಾರತವು ಬಾಹ್ಯಾಕಾಶ ಅನ್ವೇಷಣೆಯಲ್ಲಿ ಮಹತ್ವದ ಸಾಧನೆ ಮಾಡುತ್ತಿದೆ ಎಂದು ಅವರು ತಿಳಿಸಿದರು.

## ಫಾರ್ಮ್ ನಂಬರ್ 7 ದುರ್ಬಳಕೆ : ಕಾಂಗ್ರೆಸ್ ತೀವ್ರ ವಾಗ್ದಾಳಿ




ಮಂಗಳೂರು: ಮೂಡುಶೆಡ್ಡೆ ಹಾಗೂ ಜೋಕಟ್ಟೆ ಸೇರಿದಂತೆ ವಿವಿಧೆಡೆ ಫಾರ್ಮ್ ನಂಬರ್ 7 ಅನ್ನು ವ್ಯವಸ್ಥಿತವಾಗಿ ದುರ್ಬಳಕೆ ಮಾಡಿಕೊಂಡು ಮುಸ್ಲಿಂ ಹಾಗೂ ಕ್ರಿಶ್ಚಿಯನ್ ಸಮುದಾಯಗಳ ನೈಜ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲು ಹುನ್ನಾರ ನಡೆಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಸಮಿತಿಯು ಗಂಭೀರ ಆರೋಪ ಮಾಡಿದೆ. ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪದ್ಮರಾಜ್ ಪೂಜಾರಿ ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಿಥುನ್ ರೈ ಈ ಕುರಿತು ವಿಸ್ತೃತ ವಿವರಗಳನ್ನು ಹಂಚಿಕೊಂಡಿದ್ದಾರೆ. ಜೋಕಟ್ಟೆ ಹಾಗೂ ಮೂಡುಶೆಡ್ಡೆ ಪ್ರದೇಶಗಳಲ್ಲಿ ಸೆಪ್ಟೆಂಬರ್ 22ರಂದು ಅರ್ಜಿಗಳನ್ನು ಸಲ್ಲಿಸಿ, ಕೇವಲ ಒಂದೇ ಕಡೆ 38 ರಿಂದ 61ರಷ್ಟು ಕ್ರೈಸ್ತ ಧರ್ಮದ ಮತದಾರರ ಹಾಗೂ ಅಲ್ಪಸಂಖ್ಯಾತರ ಹೆಸರುಗಳನ್ನು ಡಿಲೀಟ್ ಮಾಡಲು ನಕಲಿ ಅರ್ಜಿಗಳನ್ನು ನೀಡಲಾಗಿದೆ ಎಂದು ಪದ್ಮರಾಜ್ ಪೂಜಾರಿ ಆಕ್ರೋಶ ವ್ಯಕ್ತಪಡಿಸಿದರು. ಸಂವಿಧಾನ ವಿರೋಧಿ ಕೃತ್ಯಗಳನ್ನು ಎಸಗುವವರನ್ನು ಬಿಜೆಪಿ ಪಕ್ಷವು ರಕ್ಷಿಸುತ್ತಿದೆ ಎಂದು ಟೀಕಿಸಿದ ಅವರು, ಯಾರ ಮೇಲಾದರೂ ಎಫ್‌ಐಆರ್ ದಾಖಲಾದರೆ ಪೊಲೀಸ್ ಸ್ಟೇಷನ್‌ಗೆ ನುಗ್ಗುತ್ತೇವೆ ಎಂದು ಹಿರಿಯ ಬಿಜೆಪಿ ನಾಯಕರು ನೀಡಿರುವ ಹೇಳಿಕೆಗಳು ಅವರ ಕೀಳುಮಟ್ಟದ ರಾಜಕಾರಣವನ್ನು ಎತ್ತಿ ತೋರಿಸುತ್ತದೆ ಎಂದು ಕಿಡಿಕಾರಿದರು.

## ಅಕ್ಟೋಬರ್ 11ರಿಂದ ಕರಾವಳಿಯಲ್ಲಿ ವೈಭವದ ಮಂಗಳೂರು ದಸರಾ



ಮಂಗಳೂರು: ಕರಾವಳಿಯ ಧಾರ್ಮಿಕ ಹಾಗೂ ಸಾಂಸ್ಕೃತಿಕ ಹೆಮ್ಮೆಯ ಪ್ರತೀಕವಾದ ಐತಿಹಾಸಿಕ ಮಂಗಳೂರು ದಸರಾ ಹಾಗೂ ನವರಾತ್ರಿ ಮಹೋತ್ಸವ–2026, ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರದಲ್ಲಿ ಅಕ್ಟೋಬರ್ 11ರಿಂದ 22ರವರೆಗೆ ಅತ್ಯಂತ ವೈಭವದಿಂದ ಜರುಗಲಿದೆ. ಕ್ಷೇತ್ರದ ನವೀಕರಣದ ರೂವಾರಿ, ಕೇಂದ್ರದ ಮಾಜಿ ವಿತ್ತ ಸಚಿವ ಬಿ. ಜನಾರ್ದನ ಪೂಜಾರಿ ಅವರ ಮಾರ್ಗದರ್ಶನದಲ್ಲಿ ಈ ಬಾರಿಯ ಉತ್ಸವ ನಡೆಯಲಿದ್ದು, ಭಕ್ತಿಸಾಗರಕ್ಕೆ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ ಎಂದು ಶ್ರೀ ಗೋಕರ್ಣನಾಥ ಕ್ಷೇತ್ರದ ಖಜಾಂಜಿ ಪದ್ಮರಾಜ್ ಪೂಜಾರಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ್ದಾರೆ. ಕ್ಷೇಷೇತ್ರದ ಭವ್ಯ ದರ್ಬಾರ್ ಹಾಲ್‌ನಲ್ಲಿ ಶ್ರೀ ಮಹಾಗಣಪತಿ, ಶ್ರೀ ಆದಿಶಕ್ತಿ, ನವದುರ್ಗೆಯರು ಹಾಗೂ ಜ್ಞಾನದಾಯಿನಿ ಶ್ರೀ ಶಾರದಾ ಮಾತೆಯ ನಯನಮನೋಹರ ಮೂರ್ತಿಗಳ ಪ್ರತಿಷ್ಠಾಪನೆ ಮತ್ತು ಆರಾಧನೆ ನಡೆಯಲಿದೆ. ಈ ಬಾರಿ ದರ್ಬಾರ್ ಮಂಟಪವನ್ನು ಆಕರ್ಷಕ ಅರಮನೆ (ಪ್ಯಾಲೇಸ್) ಮಾದರಿಯಲ್ಲಿ ಮನಮೋಹಕವಾಗಿ ವಿನ್ಯಾಸಗೊಳಿಸಲಾಗಿದೆ. ಭಕ್ತಿಪೂರ್ಣ ಭಜನೆ, ನೃತ್ಯ–ಸಂಗೀತ ವೈಭವ, ಕ್ರೀಡಾಕೂಟಗಳು ಹಾಗೂ ಸಮೃದ್ಧ ಜಾನಪದ ಕಲಾ ಪ್ರಕಾರಗಳು ಈ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿರಲಿವೆ.

## ಆಳ್ವಾಸ್‌ನಲ್ಲಿ 'ಆರಿ ಲಹರಿ' ತರಬೇತಿ ಸಮಾರೋಪ




ಮೂಡುಬಿದಿರೆ: ಸಕ್ಷಮಾ–ಆಳ್ವಾಸ್ ಮಹಿಳಾ ಸಂಘ ಹಾಗೂ ಆಳ್ವಾಸ್ ಹೋಮಿಯೋಪಥಿ ಮೆಡಿಕಲ್ ಕಾಲೇಜಿನ ಸಹಯೋಗದಲ್ಲಿ ಆಯೋಜಿಸಲಾಗಿದ್ದ 15 ದಿನಗಳ 'ಆರಿ ಲಹರಿ ಸ್ವಾವಲಂಬನೆಯತ್ತ ಮೊದಲ ಹೆಜ್ಜೆ' ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭವು ಮಿಜಾರ್‌ನ ಆಳ್ವಾಸ್ ಹೋಮಿಯೋಪಥಿ ಮೆಡಿಕಲ್ ಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ ಮಂಗಳವಾರ ನಡೆಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಉಜಿರೆಯ ರೂಡ್‌ಸೆಟ್ ಅಧ್ಯಾಪಕ ಅಬ್ರಹಾಂ ಜೇಮ್ಸ್ ಪಿ.ವಿ. ಮಾತನಾಡಿ, ಕಲಿತ ಪ್ರತಿಯೊಂದು ಕೌಶಲ್ಯವೂ ಬದುಕಿನಲ್ಲಿ ಯಾವುದಾದರೂ ರೀತಿಯಲ್ಲಿ ಉಪಯೋಗಕ್ಕೆ ಬರುತ್ತದೆ. ಕೌಶಲ್ಯವನ್ನು ಪ್ರಮಾಣಪತ್ರಕ್ಕೆ ಸೀಮಿತಗೊಳಿಸದೆ, ನಿರಂತರ ಅಭ್ಯಾಸ ಹಾಗೂ ಆತ್ಮವಿಶ್ವಾಸದಿಂದ ಆದಾಯದ ಮೂಲವನ್ನಾಗಿ ಪರಿವರ್ತಿಸಿ ಸ್ವಂತ ಉದ್ಯೋಗಾವಕಾಶ ಸೃಷ್ಟಿಸಿಕೊಳ್ಳಬೇಕು ಎಂದರು.




## “ಒರಿಜಿನಲ್ ಮಾನ್ ಸ್ಟರ್” ಶಿವರಾಜಕುಮಾರ್



ಭರ್ಜರಿ ಯಶಸ್ಸು ಕಂಡ ಪ್ಯಾನ್ ಇಂಡಿಯಾ “ಕಬ್ಜ” ಸೇರಿದಂತೆ ಅನೇಕ ಯಶಸ್ವಿ ಚಿತ್ರಗಳ ನಿರ್ದೇಶಕ ಆರ್ ಚಂದ್ರು, ಎರಡೂವರೆ ವರ್ಷಗಳ ನಂತರ “ಒರಿಜಿನಲ್ ಮಾನ್ ಸ್ಟರ್” ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ಆನಂದ್ ಪಂಡಿತ್ ಅರ್ಪಿಸುವ, ಆರ್ ಸಿ ಸ್ಟುಡಿಯೋಸ್ ಲಾಂಛನದಲ್ಲಿ ಯಮುನ ಚಂದ್ರು ಅವರು ನಿರ್ಮಿಸುತ್ತಿರುವ ಹಿಂದಿ ಹಾಗೂ ಕನ್ನಡ ಎರಡು ಭಾಷೆಗಳಲ್ಲಿ ಏಕಕಾಲಕ್ಕೆ ನಿರ್ಮಾಣವಾಗುತ್ತಿರುವ ಹಾಗೂ ಕರುನಾಡ ಚಕ್ರವರ್ತಿ ಶಿವರಾಜಕುಮಾರ್ ನಾಯಕರಾಗಿ ನಟಿಸುತ್ತಿರುವ “ಒರಿಜಿನಲ್ ಮಾನ್ ಸ್ಟರ್” ಚಿತ್ರದ ಶೀರ್ಷಿಕೆ ಅನಾವರಣ ಸಮಾರಂಭ ಮುಂಬೈನಲ್ಲಿ ಹಾಗೂ ಮುಹೂರ್ತ ಸಮಾರಂಭ ಬೆಂಗಳೂರಿನಲ್ಲಿ ಅದ್ದೂರಿಯಾಗಿ ನೆರವೇರಿತ್ತು. ಈ ಚಿತ್ರದ ಮೊದಲ ಹಂತದ ಚಿತ್ರೀಕರಣ ಮುಕ್ತಾಯವಾಗಿದೆ. ಅನೇಕ ಕಲಾವಿದರು ಚಿತ್ರೀಕರಣದಲ್ಲಿ ಭಾಗಿಯಾಗಿದ್ದರು.

## ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ಹೊಸ ಅವತಾರ



ಧ್ರುವ ಸರ್ಜಾ ತಮ್ಮ ಮಾಸ್ ಇಮೇಜ್‌ನಿಂದ ಹೊರಬಂದು ಹೊಚ್ಚ ಹೊಸ ಅವತಾರದಲ್ಲಿ ಪ್ರೇಕ್ಷಕರ ಮುಂದೆ ಬರಲು ಸಜ್ಜಾಗಿದ್ದಾರೆ. ಅವರ ಮುಂದಿನ ಚಿತ್ರಕ್ಕೆ ‘ಕೆಮಿಸ್ಟ್ರಿ’ ಎಂಬ ಆಕರ್ಷಕ ಶೀರ್ಷಿಕೆ ಇಡಲಾಗಿದ್ದು, ನಟಿ ನಭಾ ನಟೇಶ್ ನಾಯಕಿಯಾಗಿ ಸಾಥ್ ನೀಡುತ್ತಿದ್ದಾರೆ. ದಕ್ಷಿಣ ಭಾರತದ ಖ್ಯಾತ ನಿರ್ಮಾಣ ಸಂಸ್ಥೆ ‘ಪೀಪಲ್ ಮೀಡಿಯಾ ಫ್ಯಾಕ್ಟರಿ’ ಬ್ಯಾನರ್ ಅಡಿಯಲ್ಲಿ ಟಿ.ಜಿ. ವಿಶ್ವಪ್ರಸಾದ್ ಮತ್ತು ಕೃತಿ ಪ್ರಸಾದ್ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಯುವ ನಿರ್ದೇಶಕ ವಿಶಾಲ್ ಆತ್ರೇಯ ನಿರ್ದೇಶನ ಮಾಡುತ್ತಿದ್ದಾರೆ. ಈವರೆಗೂ ಭರ್ಜರಿ ಸಾಹಸ, ಮಾಸ್ ಡೈಲಾಗ್‌ಗಳ ಮೂಲಕವೇ ಚಿತ್ರಮಂದಿರಗಳಲ್ಲಿ ಸಿಳ್ಳೆ, ಚಪ್ಪಾಳೆ ಗಿಟ್ಟಿಸಿಕೊಳ್ಳುತ್ತಿದ್ದ ಧ್ರುವ ಸರ್ಜಾ, ಈ ಬಾರಿ ಮನ ಮಿಡಿಯುವ ಪ್ರೇಮಕಥೆ ಮತ್ತು ಅಪ್ಪಟ ಕೌಟುಂಬಿಕ ಕಥಾಹಂದರವನ್ನು ಆಯ್ಕೆ ಮಾಡಿಕೊಂಡಿದ್ದಾರೆ.

## ‘ಮದುರೆಗೆ ಹೋದನು ಮಾಧವ’ ಹಾಡು ರಿಲೀಸ್

ಕಾರ್ತಿಕ್ ಶರ್ಮಾ ಚೊಕ್ಕಲ ನಿರ್ದೇಶನದ ‘ಭಾವಾಂತರ’ ಚಿತ್ರದ 3ನೇ ಹಾಡು ಹೊಂಬಾಳೆ ಮ್ಯೂಸಿಕ್ ಯುಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿದ್ದು, ಸೋಷಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಖ್ಯಾತ ಕವಿ ಡಾ. ಎಚ್.ಎಸ್. ವೆಂಕಟೇಶ ಮೂರ್ತಿ ಅವರ ಜನಪ್ರಿಯ ಭಾವಗೀತೆ ಮದುರೆಗೆ ಹೋದನು ಮಾಧವ’ ಹಾಡನ್ನು ಚಿತ್ರಕ್ಕೆ ಅಳವಡಿಸಿಕೊಳ್ಳಲಾಗಿದೆ. ಈ ಹಾಡಿಗೆ ಸ್ವತಃ ನಿರ್ದೇಶಕ ಕಾರ್ತಿಕ್ ಶರ್ಮಾ ಸಂಗೀತ ಸಂಯೋಜಿಸಿದ್ದು, ಗಾಯಕಿ ಐಶ್ವರ್ಯಾ ರಂಗರಾಜನ್ ತಮ್ಮ ಸುಮಧುರ ಕಂಠದಲ್ಲಿ ಜೀವ ತುಂಬಿದ್ದಾರೆ. ಈ ವಿಡಿಯೋ ಸಾಂಗ್‌ನ ಪ್ರಮುಖ ಹೈಲೈಟ್ ಎಂದರೆ, 3 ನಿಮಿಷಕ್ಕೂ ಹೆಚ್ಚಿನ ಅವಧಿಯ ಈ ಹಾಡನ್ನು ‘ಸಿಂಗಲ್ ಶಾಟ್’ನಲ್ಲಿ ಚಿತ್ರೀಕರಿಸಲಾಗಿದೆ. ಈ ಹಾಡು ಚಿತ್ರಕ್ಕೆ ದೊಡ್ಡ ಮಟ್ಟದ ಮೈಲೇಜ್ ತಂದುಕೊಟ್ಟಿದ್ದು, ಸಿನಿಮಾ ಅತಿ ಶೀಘ್ರದಲ್ಲೇ ಬಿಡುಗಡೆಯಾಗಲಿದೆ.



## ‘ನಾಗುಗೆ ವಧು ಬೇಕಾಗಿದೆ’ ಇದೇ ತಿಂಗಳಲ್ಲಿ ತೆರೆಗೆ

ಬಹುತೇಕ ಗಂಡು ಮಕ್ಕಳಿಗೆ ಮದುವೆಗೆ ಹೆಣ್ಣು ಸಿಗುತ್ತಿಲ್ಲ. ಇದು ಈಗ ದೊಡ್ಡ ಸಮಸ್ಯೆ. ಇದಕ್ಕೆ ಕಾರಣಗಳು ಹಲವಾರು. ಇಂತಹ ಪ್ರಸ್ತುತ ಪರಿಸ್ಥಿತಿಯನ್ನಿಟ್ಟುಕೊಂಡು ನಿರ್ದೇಶಕ ಆರ್ ಕೆ “ನಾಗುಗೆ ವಧು ಬೇಕಾಗಿದೆ” ಎನ್ನುವ ಸಿನಿಮಾ ಮಾಡಿದ್ದಾರೆ. ಆರ್ ಕೆ ಅವರೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸಿರುವ ಈ ಚಿತ್ರ ಶ್ರೀಗುರು ರಾಘವೇಂದ್ರ ಕನ್ನಡ ಸಿನಿಮಾಸ್ ಲಾಂಛನದಲ್ಲಿ ನಿರ್ಮಾಣವಾಗಿದೆ. ಈ ಚಿತ್ರ ಅಕ್ಟೋಬರ್‌ನಲ್ಲೇ ತೆರೆಗೆ ಬರಲಿದೆ. ಚಿತ್ರದ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರದಲ್ಲಿ ನಟಿಸಿರುವ ಅಪೂರ್ವಶ್ರೀ, ಚಿತ್ರಾಲ್ ರಂಗಾಸ್ವಾಮಿ, ಸೋನಿಕಾ ಸೋಮಣ್ಣ, ಶರತ್, ರವಿ, ಪುನೀತ್ ಮುಂತಾದವರು ತಮ್ಮ ಪಾತ್ರದ ಕುರಿತು ಮಾತನಾಡಿದರು. ಸಂಗೀತ ನಿರ್ದೇಶಕ ಶ್ರೀಸುರೇಶ್ ಸಂಗೀತದ ಬಗ್ಗೆ ಮಾಹಿತಿ ನೀಡಿದರು.









KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd ‘A’ Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021